ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ವಿಕಲಚೇತನರಿಗಾಗಿ ನಡೆಸುತ್ತಿರುವ ಶಾಲೆಗಳ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

436(512) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ವಿಕಲಚೇತನರಿಗಾಗಿ ಸರ್ಕಾರವು ಸಾಕಷ್ಟು ಅಭಿವೃದ್ಧಿ ಕ್ರಮಗಳನ್ನು ಕೈಗೊಂಡಿದ್ದರೂ, ಅದು ಫಲಾನುಭವಿಗಳಿಗೆ ತಲುಪುತ್ತಿಲ್ಲವೆಂದು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರಾಜ್ಯದಲ್ಲಿ ಸರ್ಕಾರ ಮತ್ತು ಸರ್ಕಾರೇತರ ಸಂಸ್ಥೆಗಳಿಂದ ವಿಕಲಚೇತನರಿಗಾಗಿ ನಡೆಸುತ್ತಿರುವ ಶಾಲೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಇಂತಹ ಶಾಲೆಗಳಲ್ಲಿ ಆಯಾ ವಿಷಯದಲ್ಲಿ ಪರಿಣಿತಿ ಹೊಂದಿರುವ ಶಿಕ್ಷಕರನ್ನು ನೇಮಕ ಮಾಡಲಾಗಿದೆಯೇ;

(ಈ) ಇಂತಹ ವಿಶೇಷ ಶಾಲೆಗಳಲ್ಲಿ ಶಿಕ್ಷಕರ ಆಭಾವವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದಲ್ಲಿ, ಕುಂದುಕೊರತೆಗಳ ಪರಿಹಾರಕ್ಕಾಗಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು?